**ಸಾಕ್ಷಿಯನ್ನು ದಿಃ *17/09/2025* ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಎದುರುದಾರರ ಪರ ವಕೀಲರಿಂದ.**

ನಾನು ಮುಖ್ಯ ವಿಚಾರಣೆಯಾಗಿ ನನ್ನ ಪ್ರಮಾಣಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿನ ಸಂಗತಿಗಳು ಸತ್ಯವಾಗಿವೆ.

ನಾನು ನ್ಯಾಯಾಲಯಕ್ಕೆ ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆ.

| ಅ.ನಂ. | ದಾಖಲೆಗಳು |
|---|---|
| **ನಿ.ಆರ್.**1 | ಅಧಿಕಾರ ಪತ್ರ |
| **ನಿ.ಆರ್.**2 | ವಿಮೆ ಪ್ರತಿ |

ಆದುದರಿಂದ ಪ್ರಮಾಣಪತ್ರ ಮತ್ತು ದಾಖಲೆಗಳನ್ನು ಪರಿಶೀಲಿಸಿ ಅರ್ಜಿಯನ್ನು ವಜಾ ಮಾಡಬೇಕಾಗಿ ವಿನಂತಿ.

***ಪಾಟೀ ಸವಾಲು ಃ ಅರ್ಜಿದಾರರ ಪರ ವಕೀಲರಿಂದ.***

ನಾನು ಅಪಘಾತವನ್ನು ನೋಡಿಲ್ಲ, ಪೊಲೀಸ ದಾಖಲೆಗಳ ಆಧಾರದ ಮೇಲೆ ಸಾಕ್ಷವನ್ನು ನುಡಿಯುತ್ತಿದ್ದೇನೆ. ಮೃತನು ಮದ್ಯಪಾನ ಸೇವಿಸಿ ರಸ್ತೆ ದಾಟಲು ಪ್ರಯತ್ನ ಮಾಡಿದ್ದಾನೆ ಎಂದು ಅಂತಿಮ ವರದಿಯಲ್ಲಿ ಎಲ್ಲಿಯೂ ಉಲ್ಲೇಖವಾಗಿಲ್ಲ ಎಂದರೆ ಸರಿಯಲ್ಲ. ಈ ರೀತಿ ಹೇಳಿಕೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಪ್ರಮಾಣಪತ್ರದಲ್ಲಿ 5ನೇ ಖಂಡಿಕೆಯಲ್ಲಿರುವ ಅಪಘಾತ ಸ್ಥಳ ರಾಷ್ಟ್ರೀಯ ಹೆದ್ದಾರಿಯಿದ್ದು, ಅದನ್ನು ದಾಟಲು ಯಾವುದೇ ರೀತಿ ಅಡ್ಡರಸ್ತೆ ಮತ್ತು ಬ್ರಿಡ್ಜ ಇರುವುದಿಲ್ಲ ಎಂದು ಬರೆದಿರುವ ಕುರಿತು ಯಾವುದೇ ಪುರಾವೆ ನೀಡಿಲ್ಲ ಎಂದರೆ ನಿಜ, ಸಾಕ್ಷಿದಾರರು ಮುಂದುವರೆದು ಅರ್ಜಿದಾರರು ಒಪ್ಪಿಕೊಂಡಿದ್ದು ಇರುತ್ತದೆ ಎಂದು ಹೇಳುತ್ತಾರೆ.

ಅಪಘಾತ ದಿನಾಂಕದಂದು ವಾಹನದ ವಿಮೆ ಚಾಲ್ತಿಯಲ್ಲಿತ್ತು ಎಂದರೆ ನಿಜ. ಸಾಕ್ಷಿದಾರರು ಮುಂದುವರೆದು ಚಾಲಕನಿಗೆ ಸೂಕ್ತವಾದ ಚಾಲನಾ ಪರವಾನಿಗೆ ಪತ್ರವಿರಲಿಲ್ಲ ಎಂದು ಹೇಳುತ್ತಾರೆ. ಚಾಲನಾ ಪರವಾನಿಗೆ ಪತ್ರವಿರಲಿಲ್ಲ ಎಂದು ಚಾರ್ಜಶೀಟನಲ್ಲಿ ಎಲ್ಲಿಯೂ ಉಲ್ಲೇಖವಿಲ್ಲ ಎಂದರೆ ಸರಿ. ಆದ್ದರಿಂದ ನಮ್ಮ ವಿಮೆ ಕಂಪನಿಯವರಿಗೆ ಅನುಕೂಲವಾಗಲಿ ಎಂದು ಈ ರೀತಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ವಾಹನದಿಂದ ಅಪಘಾತವಾಗಿರುವ ಕಾರಣ ಮೃತನ ಪರಿವಾರಕ್ಕೆ ಪರಿಹಾರ ಹಣ

ಕೊಡಲು ನಾವು ಬಾಧ್ಯಸ್ಥರು ಇದ್ದರು ಸಹ ಈ ರೀತಿ ಸುಳ್ಳು ಪ್ರಮಾಣಪತ್ರದೊಂದಿಗೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

***ಮರು ವಿಚಾರಣೆ : ಇಲ್ಲ.***

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ,

1 ನೇ ಹೆ ಹಿ ದಿ ನ್ಯಾ ಹಾಗೂ ಸಿಜೆಎಂ,
ಧಾರವಾಡ.